## ಕರ್ನಾಟಕ ಮಾರಾಟ ತೆರಿಗೆ ಮತ್ತು ಕೆಲವು ಇತರ ಕಾನೂನಿನ (ತಿದ್ದುಪಡಿ) ವಿಧೇಯಕ, 1998

ಶ್ರೀ ಸಿದ್ಧರಾಮಯ್ಯ : (ಉಪಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೇ, 1998ನೇ ಸಾಲಿನ ಕರ್ನಾಟಕ ಮಾರಾಟ ತೆರಿಗೆ ಮತ್ತು ಕೆಲವು ಇತರ ಕಾನೂನಿನ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "1998ನೇ ಸಾಲಿನ ಕರ್ನಾಟಕ ಮಾರಾಟ ತೆರಿಗೆ ಮತ್ತು ಕೆಲವು ಇತರ ಕಾನೂನಿನ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

*. ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು*

ಶ್ರೀ ಸಿದ್ಧರಾಮಯ್ಯ : (ಉಪಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೇ, 1998ನೇ ಸಾಲಿನ ಕರ್ನಾಟಕ ಮಾರಾಟ ತೆರಿಗೆ ಮತ್ತು ಇತರ ಕೆಲವು ಇತರ ಕಾನೂನಿನ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.*

## ಪರ್ಯಾಲೋಚನಾ ಪ್ರಸ್ತಾವ

## ಕರ್ನಾಟಕ ಧನ ವಿನಿಯೋಗ (ನಂ. 1) ವಿಧೇಯಕ 1998

ಶ್ರೀ ಸಿದ್ಧರಾಮಯ್ಯ (ಉಪ ಮಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೇ, 1998ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ನಂ.1) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

*ಪ್ರಸ್ತಾವವನ್ನು ಮಂಡಿಸಲಾಯಿತು*

+ ಶ್ರೀ ಸಿದ್ಧರಾಮಯ್ಯ : (ಉಪಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೇ, ನಾನು ಬಜೆಟ್ ಮಂಡಿಸಿದಾಗ ಮೂರು ತಿಂಗಳಿಗೆ ಲೇಖಾನುದಾನವನ್ನು ಪಡೆದುಕೊಂಡಿದ್ದೆವು. ಸಭೆ ಮೂರು ತಿಂಗಳಿಗೆ ಒಪ್ಪಿಗೆ ಕೊಟ್ಟಿತು. ಈಗ 1998-99ನೇ ಸಾಲಿನಲ್ಲಿ ವಿವಿಧ ಬಾಬುಗಳಲ್ಲಿ ಖರ್ಚು ಮಾಡತಕ್ಕಂಥ ಹಣಕ್ಕೆ ಒಪ್ಪಿಗೆ ಕೊಡಬೇಕೆಂದು ಹೇಳಿ, ಧನ ವಿನಿಯೋಗ ಮಸೂದೆಯನ್ನು ಮಂಡಿಸಿದ್ದೇನೆ. ಎಲ್ಲಾ ಬೇಡಿಕೆಗಳ ಬಗ್ಗೆ ಈ ಬಾರಿ ಚರ್ಚೆಯಾಗಿದೆ. ಬಹಳ ಮುಖ್ಯವಾದಂತಹ ಇಲಾಖಾ ಬೇಡಿಕೆಗಳ ಮೇಲೆಲ್ಲಾ ಚರ್ಚೆಯಾಗಿ ಅದಕ್ಕೆ ಈ ಸದನ ಕೂಡ ಒಪ್ಪಿಗೆ ಕೊಟ್ಟಿದೆ. ಆದ್ದರಿಂದ ಅದರ ಎಲ್ಲಾ ವಿವರಗಳಿಗೆ ನಾನು ಹೋಗುವುದಿಲ್ಲ. ಆದ್ದರಿಂದ ಧನ ವಿನಿಯೋಗ ಮಸೂದೆಗೆ ಒಪ್ಪಿಗೆಕೊಡಬೇಕೆಂದು ಸದನವನ್ನು ಕೋರುತ್ತೇನೆ.

---